ಪರೀಕ್ಷಾ ತುರ್ತು

ಕರ್ನಾಟಕ ಸರ್ಕಾರ

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ. ಬೆಂಗಳೂರು-560003**

**********************************************************************************************

ಸಂಖ್ಯೆ:ಎ8/ಎಸ್ಎಸ್ಎಲ್ಸಿ/ಸೆಪ್ಟೆಂ-2020/22/2020-21 ದಿನಾಂಕ:14.09.2020

<u>ತುರ್ತಾಗಿ ಮತ್ತು ಕಡ್ಡಾಯವಾಗಿ ಪರಿಶೀಲಿಸುವುದು</u>

## :: ಸುತ್ತೋಲೆ ::

ವಿಷಯ:-ಸೆಪ್ಟೆಂಬರ್-2020ರ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಪ್ರವೇಶ ಪತ್ರ ಪರಿಶೀಲನೆ ಕುರಿತು.

******

ಸೆಪ್ಟೆಂಬರ್-2020ರ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಗೆ ನಿಮ್ಮ ಶಾಲೆಯಿಂದ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲಾಗಿದೆ. ನಿಮ್ಮ ಶಾಲೆಗೆ ಸಂಬಂಧಪಟ್ಟ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಡೌನ್‌ಲೋಡ್ ಮಾಡಿಕೊಂಡು ಮುದ್ರಿಸಿಕೊಳ್ಳುವುದು.

1. ನಿಮ್ಮ ಶಾಲೆಯಿಂದ ಕಳುಹಿಸಿದ CCERR/CCEPR/NSR/NSPR ವಿದ್ಯಾರ್ಥಿಗಳ ಸಂಖ್ಯೆಗೆ ಅನುಸಾರ ನಿಮ್ಮ ಶಾಲೆಗೆ ಸಂಬಂಧಪಟ್ಟಂತೆ ಮಂಡಳಿ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಮುದ್ರಿಸಿಕೊಂಡಿರುವ ಪ್ರವೇಶ ಪತ್ರಗಳ ಸಂಖ್ಯೆಗಳು ಸರಿ ಹೊಂದುತ್ತಿವೆಯೆ? ಒಂದು ವೇಳೆ ಸರಿ ಹೊಂದದಿದ್ದಲ್ಲಿ ಯಾವ ಅಭ್ಯರ್ಥಿಯ ಪ್ರವೇಶ ಪತ್ರ ಬಂದಿಲ್ಲವೆಂಬುದನ್ನು ಖಚಿತಪಡಿಸಿಕೊಂಡು ಅಗತ್ಯ ಕ್ರಮಕ್ಕಾಗಿ ಸಮರ್ಥನೆಯೊಂದಿಗೆ/ ದಾಖಲೆಗಳನ್ನು ದಿನಾಂಕ:16.09.2020ರೊಳಗೆ ಕಳುಹಿಸಿಕೊಡುವುದು.
2. ಪ್ರವೇಶ ಪತ್ರದಲ್ಲಿ ಹಾಗೂ ಕೇಂದ್ರ ನಾಮಪಟ್ಟಿಯಲ್ಲಿ ಭಾವಚಿತ್ರ ಇಲ್ಲದೇ ಇರುವ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ಅನುಮತಿ ನೀಡಲಾಗುವುದಿಲ್ಲ. ಇದರಿಂದ ವಿದ್ಯಾರ್ಥಿಗೆ ಆಗುವ ತೊಂದರೆಗೆ ಸಂಬಂಧಿಸಿದ ಶಾಲಾ ಮುಖ್ಯಸ್ಥರೇ ಜವಾಬ್ದಾರರಾಗಿದ್ದು, ಮಂಡಳಿಯು ಇದರ ಜವಾಬ್ದಾರಿ ಹೊರುವುದಿಲ್ಲ ಎಂದು ಸ್ಪಷ್ಟಪಡಿಸಿದೆ.
3. ಜೂನ್/ಜುಲೈ-2020ರ ಪರೀಕ್ಷೆಗೆ (Shortage of attendance) ಹಾಜರಾತಿ ಕೊರತೆಯಿಂದ ಪರೀಕ್ಷೆ ಬರಯಲಾಗದ ವಿದ್ಯಾರ್ಥಿಗೆ ಯಾವುದೇ ಕಾರಣಕ್ಕೂ ಸೆಪ್ಟೆಂಬರ್-2020ರ ಪರೀಕ್ಷೆಗೆ ಅವಕಾಶ ನೀಡಬಾರದು.
4. ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ನು ಪಾಲಿಸಲು ವಿದ್ಯಾರ್ಥಿಗಳಿಗೆ ಅಗತ್ಯವಾದ ಮಾಹಿತಿಯನ್ನು ನೀಡುವುದು.
5. ರೆಗ್ಯುಲರ್ / ಖಾಸಗಿ ಅಭ್ಯರ್ಥಿಗಳ ಪ್ರವೇಶ ಪತ್ರಗಳಲ್ಲಿ ಪ್ರಶ್ನೆ ಪತ್ರಿಕೆಯ ವಿಧವನ್ನು ನಮೂದಿಸಲಾಗಿದೆ. ಈ ಬಗ್ಗೆ ಮುಖ್ಯ ಶಿಕ್ಷಕರು ಗಮನಿಸಿ ಖಾತರಿಪಡಿಸಿಕೊಳ್ಳುವುದು. ಹಾಗೂ ಈ ಬಗ್ಗೆ ಅಭ್ಯರ್ಥಿಗಳಿಗೆ ಮನವರಿಕೆ ಮಾಡಲು ಕ್ರಮವಹಿಸುವುದು.

6. NSR ಅಭ್ಯರ್ಥಿಗಳು ಈ ಮೊದಲು ಸಾಮಾನ್ಯ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗೆ ಹಾಜರಾಗುತ್ತಿದ್ದು, ಜೂನ್-2018ರ ಪೂರಕ ಪರೀಕ್ಷೆಯಿಂದ ಆಡಳಿತ ಹಾಗೂ ತಾಂತ್ರಿಕ ಕಾರಣಾಂತರಗಳಿಂದ ಜಿಲ್ಲಾ ಖಾಸಗಿ ಪರೀಕ್ಷಾ ಕೇಂದ್ರಗಳಿಗೆ ಸೇರ್ಪಡೆ ಮಾಡಲಾಗಿದೆ. ಶಾಲಾ ಮುಖ್ಯ ಶಿಕ್ಷಕರು ಸಂಬಂಧಿಸಿದ ಅಭ್ಯರ್ಥಿಗಳಿಗೆ ಮಾಹಿತಿಯನ್ನು ನೀಡುವುದು.
7. ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು, ಪ್ರವೇಶ ಪತ್ರದಲ್ಲಿ ಪರೀಕ್ಷೆಗೆ ಹಾಜರಾಗುವ ವಿಷಯದ ಮುಂದೆ ನಮೂದಿಸಿರುವ ಪ್ರಶ್ನೆ ಪತ್ರಿಕೆ Version (A,B,C,D) ನನ್ನು ಖಾತರಿ ಪಡಿಸಿಕೊಳ್ಳುವುದು. ಅದೇ ವಿಷಯದ ಪ್ರಶ್ನೆ ಪತ್ರಿಕೆಯ, ಅದೇ Version ನಮೂದಿಸಿರುವ ಪ್ರಶ್ನೆ ಪತ್ರಿಕೆಯನ್ನು ಸ್ವೀಕರಿಸಲಾಗಿದೆಯೇ ಎಂಬುದನ್ನು ಅಭ್ಯರ್ಥಿಗಳು ಪರೀಕ್ಷೆ ಬರೆಯಲು ಪ್ರಾರಂಭಿಸುವ ಮುನ್ನ ಪರಿಶೀಲಿಸಿಕೊಳ್ಳುವುದು. ಈ ಸಂಬಂಧ ಶಾಲಾ ಮುಖ್ಯೋಪಾಧ್ಯಾಯರು ಅಭ್ಯರ್ಥಿಗಳಿಗೆ ಮಾಹಿತಿ ನೀಡುವುದು.

ಸೆಪ್ಟೆಂಬರ್-2020ರ ಪೂರಕ ಪರೀಕ್ಷೆಯ ವೇಳಾಪಟ್ಟಿಯಂತೆ ಪರೀಕ್ಷೆಗೆ ಸಕಾಲದಲ್ಲಿ ಹಾಜರಾಗಲು ಸಂಬಂಧಿಸಿದ ಅಭ್ಯರ್ಥಿಗಳಿಗೆ/ಪೋಷಕರಿಗೆ ಮನವರಿಕೆ ಮಾಡಲು ಮುಖ್ಯಶಿಕ್ಷಕರಿಗೆ ತಿಳಿಸಿದೆ.

(ವಿ. ಸುಮಂಗಲ) 14/9
ನಿರ್ದೇಶಕರು, ಪರೀಕ್ಷೆಗಳು

ಇವರಿಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ನೋಡಲ್ ಅಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಶಿಕ್ಷಕರುಗಳಿಗೆ ಅಗತ್ಯಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ ಅಗತ್ಯಕ್ರಮಕ್ಕಾಗಿ.
4. ಉಪನಿರ್ದೇಶಕರು(ಆಡಳಿತ), ಕಪ್ರೌಶಿಪ ಮಂಡಳಿ ಇವರ ಮಾಹಿತಿಗಾಗಿ.
5. ಶಾಖಾಧಿಕಾರಿಗಳು, ಬಿ-ಶಾಖೆ.
6. ಶಾಖಾಧಿಕಾರಿಗಳು, ಸಿ-ಶಾಖೆ.
7. ಶಾಖಾಧಿಕಾರಿಗಳು ಗಣಕ ಶಾಖೆ ಇವರಿಗೆ ಈ ಸುತ್ತೋಲೆಯನ್ನು ಅಂತರ್ ಜಾಲದಲ್ಲಿ ಪ್ರಕಟಿಸುವುದು.
8. ನಿರ್ದೇಶಕರು/ಕಾರ್ಯದರ್ಶಿಗಳ ಆಪ್ತ ಶಾಖೆಯ ಮಾಹಿತಿಗಾಗಿ.
9. ಮಂಡಳಿಯ ಎಲ್ಲಾ ಶಾಖಾಧಿಕಾರಿಗಳು ಮತ್ತು ಅಧೀಕ್ಷಕರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
10. ಕಛೇರಿ ಪ್ರತಿ.